**All India Radio: Bangalore**
**National Bulletin In Kannada**
**30.03.2026 13.10 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**30.03.2026 13.10 hrs**

**<>><><*><><<>**

ಮುಖ್ಯಾಂಶಗಳು

**೧. ತಮಿಳುನಾಡು, ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಗೆ ಅಧಿಸೂಚನೆ ಪ್ರಕಟ ; ನಾಮಪತ್ರ ಸಲ್ಲಿಕೆ ಆರಂಭ**

**೨. ನ್ಯಾಯದ ಲಭ್ಯತೆ ಪ್ರಜಾಪ್ರಭುತ್ವದ ಆಧಾರ - ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್**

**೩. ಬ್ಯಾಂಕುಗಳಲ್ಲಿ ಗ್ರಾಹಕರ ದತ್ತಾಂಶ ಸುರಕ್ಷತೆಗೆ ಕಟ್ಟುನಿಟ್ಟಿನ ಕಾನೂನು ಚೌಕಟ್ಟು - ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್**

**೪. ಕುವೈತ್‌ನ ವಿದ್ಯುತ್ ಮತ್ತು ಜಲ ಶುದ್ಧೀಕರಣ ಘಟಕದ ಮೇಲೆ ಇರಾನ್ ದಾಳಿ ; ಓರ್ವ ಭಾರತೀಯ ಕಾರ್ಮಿಕನ ಸಾವು ; ಭಾರತೀಯ ರಾಯಭಾರಿ ಕಚೇರಿ ಸಂತಾಪ**

**೫. ಮಂಗೋಲಿಯಾದಲ್ಲಿ ಏಷ್ಯಾನ್ ಬಾಕ್ಸಿಂಗ್ ಚಾಂಪಿಯನ್‌ಶಿಪ್ ಇಂದಿನಿಂದ ಆರಂಭ; ಭಾರತದ ಬಾಕ್ಸರ್‌ಗಳು ಕಣದಲ್ಲಿ**

**<>><><*><><<>**

ಭಾರತೀಯ ಚುನಾವಣಾ ಆಯೋಗ ತಮಿಳುನಾಡು ವಿಧಾನಸಭಾ ಚುನಾವಣೆ ಹಾಗೂ ಪಶ್ಚಿಮ ಬಂಗಾಳದ ಮೊದಲ ಹಂತದ ವಿಧಾನಸಭಾ ಚುನಾವಣೆಗೆ ಇಂದು ಅಧಿಕೃತ ಅಧಿಸೂಚನೆ ಹೊರಡಿಸಿದೆ. ಅಧಿಸೂಚನೆ ಪ್ರಕಟವಾಗುತ್ತಿದ್ದಂತೆ ಉಭಯ ರಾಜ್ಯಗಳಲ್ಲಿ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಅಧಿಕೃತವಾಗಿ ಆರಂಭಗೊಂಡಿದೆ. ತಮಿಳುನಾಡಿನ ಎಲ್ಲ ೨೩೪ ವಿಧಾನಸಭಾ ಕ್ಷೇತ್ರಗಳಿಗೆ ಏಕಹಂತದಲ್ಲಿ ಚುನಾವಣೆ ನಡೆಯಲಿದ್ದು, ಪಶ್ಚಿಮ ಬಂಗಾಳದ ಮೊದಲ ಹಂತದ ೧೫೨ ಕ್ಷೇತ್ರಗಳಿಗೆ ಮುಂದಿನ ತಿಂಗಳ ೨೩ರಂದು ಮತದಾನ ನಡೆಯಲಿದೆ. ನಾಮಪತ್ರ ಸಲ್ಲಿಸಲು ಮುಂದಿನ ತಿಂಗಳ ೬ನೇ ತಾರೀಖು ಕೊನೆಯ ದಿನವಾಗಿದೆ. ನಾಮಪತ್ರ ಪರಿಶೀಲನೆ ಏಪ್ರಿಲ್ ೭ ರಂದು ನಡೆಯಲಿದ್ದು, ಉಮೇದುವಾರಿಕೆ ಹಿಂಪಡೆಯಲು ಏಪ್ರಿಲ್ ೯ರವರೆಗೆ ಅವಕಾಶವಿದೆ. ಪಶ್ಚಿಮ ಬಂಗಾಳದಲ್ಲಿ ೨ನೇ ಹಂತದ ಚುನಾವಣೆ ಏಪ್ರಿಲ್ ೨೯ರಂದು ೧೪೨ ವಿಧಾನಸಭಾ ಕ್ಷೇತ್ರಗಳಲ್ಲಿ ನಡೆಯಲಿದೆ. ಈ ಹಂತಕ್ಕಾಗಿ ಏಪ್ರಿಲ್ ೨ರಂದು ಅಧಿಸೂಚನೆ

ಹೊರಡಿಸಲಾಗುವುದು. ಎಲ್ಲಾ ಕ್ಷೇತ್ರಗಳಿಗೆ ಮತ ಎಣಿಕೆಯನ್ನು ಮೇ ೪ರಂದು ಕೈಗೊಳ್ಳಲಾಗುವುದು.

**<>><><*><><<>**

ನವದೆಹಲಿಯಲ್ಲಿಂದು ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವಾಲಯ ದಿಶಾ ಯೋಜನೆಯಡಿ ಆಯೋಜಿಸಿದ್ದ ಟೆಲಿ-ಲಾ ಉಪಕ್ರಮದ ರಾಷ್ಟ್ರೀಯ ಸಮಾಲೋಚನಾ ಸಭೆಯಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಪಾಲ್ಗೊಂಡರು. ಈ ವೇಳೆ ಮಾತನಾಡಿದ ಅವರು, ನ್ಯಾಯದ ಲಭ್ಯತೆ ಪ್ರಜಾಪ್ರಭುತ್ವದ ಆಧಾರವಾಗಿದೆ. ಈ ರಾಷ್ಟ್ರೀಯ ಸಮಾಲೋಚನಾ ಸಭೆ ನ್ಯಾಯವು ಕೇವಲ ಕೆಲವರ ಪಾಲಿನ ಸೌಲಭ್ಯವಾಗದೆ ಎಲ್ಲರಿಗೂ ಲಭ್ಯವಾಗುವ ಹಕ್ಕಾಗಬೇಕು ಎಂಬ ಸಾಮೂಹಿಕ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದರು. ಮಹಿಳೆಯರು, ಗ್ರಾಮೀಣ ಭಾಗದ ಜನರು ಮತ್ತು ಸಮಾಜದ ಅಂಚಿನಲ್ಲಿರುವ ಸಮುದಾಯಗಳಿಗೆ ಕಾನೂನು ಸೇವೆಗಳು ತಲುಪುವಂತೆ ನೋಡಿಕೊಳ್ಳುವ ಕುರಿತು ಹೆಚ್ಚಿನ ಗಮನ ಹರಿಸಬೇಕು ಎಂದು ಕರೆ ನೀಡಿದ ಉಪರಾಷ್ಟ್ರಪತಿ, ಕಾನೂನು ನೆರವು ಕಟ್ಟಕಡೆಯ ವ್ಯಕ್ತಿಗೂ ಲಭ್ಯವಾಗುವಂತೆ ಮಾಡುವ ನಿಟ್ಟಿನಲ್ಲಿ ಇಂತಹ ತಾಂತ್ರಿಕ ಉಪಕ್ರಮಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು.

**<>><><*><><<>**

ಬ್ಯಾಂಕ್‌ಗಳಲ್ಲಿ ಗ್ರಾಹಕರ ದತ್ತಾಂಶ ಸುರಕ್ಷತೆ ಮತ್ತು ಗೌಪ್ಯತೆಯನ್ನು ಕಾಪಾಡಲು ದೇಶದ ಬ್ಯಾಂಕ್‌ಗಳು ಅತ್ಯಂತ ಕಟ್ಟುನಿಟ್ಟಾದ ಕಾನೂನು ಹಾಗೂ ನಿಯಂತ್ರಕ ಚೌಕಟ್ಟಿನಡಿಯಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಭಾರತೀಯ ರಿಸರ್ವ್ ಬ್ಯಾಂಕ್ ಹೊರಡಿಸಿರುವ ಕೆವೈಸಿ ಮಾರ್ಗಸೂಚಿಯಡಿಯಲ್ಲಿ ಗ್ರಾಹಕರ ಮಾಹಿತಿಯ ಗೌಪ್ಯತೆಯನ್ನು ಕಾಪಾಡುವುದು ಬ್ಯಾಂಕ್‌ಗಳ ಶಾಸನಬದ್ಧ ಕರ್ತವ್ಯವಾಗಿದೆ ಎಂದಿದ್ದಾರೆ. ಭಾರತೀಯ ಸ್ಟೇಟ್ ಬ್ಯಾಂಕ್ ಕಾಯ್ದೆ, ಬ್ಯಾಂಕಿಂಗ್ ಕಂಪನಿಗಳ ಕಾಯ್ದೆ, ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳ ಕಾಯ್ದೆ, ಕ್ರಿಡಿಟ್ ಮಾಹಿತಿ ಕಂಪನಿಗಳ ಕಾಯ್ದೆ ಮತ್ತು ಸಾರ್ವಜನಿಕ ಹಣಕಾಸು ಸಂಸ್ಥೆಗಳ ಕಾಯ್ದೆಗಳ ಅಡಿಯಲ್ಲಿ ಬ್ಯಾಂಕ್‌ಗಳು ಕಾರ್ಯನಿರ್ವಹಿಸಬೇಕಾಗುತ್ತದೆ. ಒಂದು ವೇಳೆ ದತ್ತಾಂಶ ಹಂಚಿಕೆಯಲ್ಲಿ ಅಕ್ರಮ ಅಥವಾ ವಂಚನೆ ನಡೆದರೆ ಗ್ರಾಹಕರು ನೇರವಾಗಿ ಆರ್‌ಬಿಐ ಅಥವಾ ಸಂಬಂಧಿತ ಪ್ರಾಧಿಕಾರಗಳಿಗೆ ದೂರು ನೀಡಬಹುದು ಎಂದು ಮಾಹಿತಿ ನೀಡಿದರು.

**<>><><*><><<>**

ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ 'ಮೇರಾ ಬೂತ್ ಸಬ್ಸೆ ಮಜಬೂತ್' ಅಭಿಯಾನದ ಅಂಗವಾಗಿ ಇಂದು ಅಸ್ಸಾಂ ಮತ್ತು ಪುದುಚೇರಿಯ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. 'ನಮೋ ಆಪ್' ಮೂಲಕ ನಡೆಯಲಿರುವ ಈ ಸಂವಾದದಲ್ಲಿ ಪ್ರಧಾನಿಯವರು ಕಾರ್ಯಕರ್ತರೊಂದಿಗೆ ನೇರ ಸಮಾಲೋಚನೆ ನಡೆಸಲಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಧಾನಿ, ಕಳೆದ ಒಂದು ದಶಕದಲ್ಲಿ ಅಸ್ಸಾಂ ಸಾಧಿಸಿರುವ ಅಭಿವೃದ್ಧಿ ಇಡೀ ದೇಶಕ್ಕೆ ಮಾದರಿಯಾಗಿದೆ ಎಂದು ಶ್ಲಾಘಿಸಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ರಾಜ್ಯವು ಕಂಡಿರುವ ಅಭೂತಪೂರ್ವ ಪ್ರಗತಿಯಿಂದಾಗಿ, ಜನತೆ ಮುಂದಿನ ಐದು ವರ್ಷಗಳ ಕಾಲ ಮತ್ತೆ ಎನ್‌ಡಿಎ ಸರ್ಕಾರವನ್ನು ಅಧಿಕಾರಕ್ಕೆ ತರಲು ನಿರ್ಧರಿಸಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಮತ್ತೊಂದು ಪೋಸ್ಟ್‌ನಲ್ಲಿ ಪುದುಚೇರಿಯ ಬಗ್ಗೆ ಉಲ್ಲೇಖಿಸಿರುವ ಅವರು, ಕಳೆದ ಐದು ವರ್ಷಗಳಲ್ಲಿ ಎನ್‌ಡಿಎ ಸರ್ಕಾರವು ಅಲ್ಲಿನ ಜನರ ಆಶೋತ್ತರಗಳನ್ನು ಈಡೇರಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಿದೆ ಎಂದು ತಿಳಿಸಿದ್ದಾರೆ. ಪುದುಚೇರಿಯ ಉತ್ಸಾಹಿ ಕಾರ್ಯಕರ್ತರೊಂದಿಗೆ ಸಂವಾದ ನಡೆಸಲು ತಾವು ಕುತೂಹಲದಿಂದ ಕಾಯುತ್ತಿರುವುದಾಗಿ ಹೇಳಿದ್ದಾರೆ.

**<>><><*><><<>**

ಪ್ರಧಾನಿ ನರೇಂದ್ರ ಮೋದಿ ನಾಳೆ ಗುಜರಾತ್‌ಗೆ ಒಂದು ದಿನದ ಭೇಟಿ ಕೈಗೊಳ್ಳಲಿದ್ದಾರೆ. ಈ ವೇಳೆ ಅವರು, ಮಹಾವೀರ ಜಯಂತಿಯ ಶುಭ ಸಂದರ್ಭದಲ್ಲಿ ಗಾಂಧಿನಗರದಲ್ಲಿ ಸಾಮ್ರಾಟ್ ಸಂಪ್ರತಿ ವಸ್ತು ಸಂಗ್ರಾಲಯವನ್ನು ಉದ್ಘಾಟಿಸಲಿದ್ದಾರೆ. ಈ ವಸ್ತು ಸಂಗ್ರಹಾಲಯದಲ್ಲಿ ಶತಮಾನಗಳಷ್ಟು ಹಳೆಯದಾದ ಅಪರೂಪದ ಅವಶೇಷಗಳು, ಜೈನ ಕಲಾಕೃತಿಗಳು ಮತ್ತು ಸಾಂಪ್ರದಾಯಿಕ ಪರಂಪರೆಯ ಸಂಗ್ರಹಗಳನ್ನು ಪ್ರದರ್ಶಿಸಲಾಗುತ್ತಿದೆ. ಭೇಟಿಯ ಭಾಗವಾಗಿ ಪ್ರಧಾನಿ ಅಹಮದಾಬಾದ್‌ನ ಸಾನಂದ್‌ನಲ್ಲಿ ಕೇನ್ಸ್ ಸೆಮಿಕಾನ್ ಘಟಕವನ್ನು ಉದ್ಘಾಟಿಲಿಸದ್ದು, ನಂತರ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಈ ಸೆಮಿಕಂಡೆಕ್ಟರ್ ಘಟಕದಲ್ಲಿ ವಾಣಿಜ್ಯ ಉತ್ಪಾದನೆ ಅಧಿಕೃತವಾಗಿ ಆರಂಭವಾಗಲಿದೆ.

**<>><><*><><<>**

ಬಿಹಾರ ಮುಖ್ಯಮಂತ್ರಿ ಮತ್ತು ಜೆಡಿಯು ಅಧ್ಯಕ್ಷ ನಿತೀಶ್ ಕುಮಾರ್, ರಾಜ್ಯ ವಿಧಾನಪರಿಷತ್ತಿನ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದಾರೆ. ಇತ್ತೀಚೆಗಷ್ಟೆ ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ಸಾಂವಿಧಾನಿಕ ನಿಯಮಗಳ ಅನ್ವಯ ಅವರು ಈ ನಿರ್ಧಾರ ಕೈಗೊಂಡಿದ್ದಾರೆ. ಜೆಡಿಯು ಸದಸ್ಯ ಸಂಜಯ್ ಗಾಂಧಿ, ನಿತೀಶ್‌ಕುಮಾರ್ ಅವರ ರಾಜೀನಾಮೆ

ಪತ್ರವನ್ನು ವಿಧಾನ ಪರಿಷತ್ತಿನ ಸಭಾಪತಿ ಅವದೇಶ್ ನಾರಾಯಣ್ ಸಿಂಗ್, ಅವರಿಗೆ ಹಸ್ತಾಂತರಿಸಿದ್ದಾರೆ. ಈ ಕುರಿತು ಶೀಘ್ರದಲ್ಲೇ ಅಧಿಕೃತ ಪ್ರಕಟಣೆ ಹೊರಬೀಳುವ ನಿರೀಕ್ಷೆಯಿದೆ. ಇದೇ ವೇಳೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಹಾಗೂ ನೂತನವಾಗಿ ಆಯ್ಕೆಯಾಗಿರುವ ರಾಜ್ಯಸಭಾ ಸಂಸದ ನಿತಿನ್ ನಬಿನ್ ಬಿಹಾರ್, ವಿಧಾನಸಭೆ ಸದಸ್ಯತ್ವಕ್ಕೆ ಇಂದು ರಾಜೀನಾಮೆ ನೀಡುವುದಾಗಿ ಘೋಷಿಸಿದ್ದಾರೆ.

<>><><*><><<>

ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷ ತಾರಕಕ್ಕೇರಿದ್ದು, ಇಂದು ಮುಂಜಾನೆ ಕುವೈತ್‌ನ ವಿದ್ಯುತ್ ಮತ್ತು ನೀರು ಶುದ್ಧೀಕರಣ ಘಟಕದ ಮೇಲೆ ಇರಾನ್ ನಡೆಸಿದ ದಾಳಿಯಲ್ಲಿ ಭಾರತೀಯ ಕಾರ್ಮಿಕರೊಬ್ಬರು ಮೃತಪಟ್ಟಿದ್ದಾರೆ ಎಂದು ಕುವೈತ್‌ನ ವಿದ್ಯುತ್ ನೀರು ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯ ಅಧಿಕೃತವಾಗಿ ಪ್ರಕಟಿಸಿದೆ. ಇದರೊಂದಿಗೆ ಪ್ರಸ್ತುತ ನಡೆಯುತ್ತಿರುವ ಯುದ್ಧದಲ್ಲಿ ಮೃತಪಟ್ಟ ಭಾರತೀಯರ ಸಂಖ್ಯೆ ಕನಿಷ್ಠ ಲಕ್ಕೇರಿಕೆಯಾಗಿದೆ. ಈ ಕುರಿತು ಮಾಹಿತಿ ನೀಡಿರುವ ಸಚಿವಾಲಯದ ವಕ್ತಾರರಾದ ಫಾತಿಮಾ ಅಬ್ಬಾಸ್ ಜೌಹರ್ ಹಯಾತ್, ಇರಾನ್ ದಾಳಿಯ ಬೆನ್ನಲ್ಲೆ ತುರ್ತು ಮತ್ತು ತಾಂತ್ರಿಕ ತಂಡಗಳನ್ನು ಸ್ಥಳಕ್ಕೆ ನಿಯೋಜಿಸಲಾಗಿದ್ದು, ನಿಗದಿತ ತುರ್ತು ಯೋಜನೆಗಳ ಅನುಸಾರ ಹಾನಿಯನ್ನು ನಿಯಂತ್ರಿಸಲು ಮತ್ತು ಘಟಕದ ಕಾರ್ಯಾಚರಣೆಯನ್ನು ಮುಂದುವರಿಸಲು ಕ್ರಮಕೈಗೊಳ್ಳಲಾಗಿದೆ ಎಂದು ತಿಳಿಸಿದಾರೆ. ಭಾರತೀಯ ಪ್ರಜೆಯೊಬ್ಬರು ಮೃತಪಟ್ಟಿರುವ ಘಟನೆಗೆ ಕುವೈತ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ತೀವ್ರ ಸಂತಾಪ ವ್ಯಕ್ತಪಡಿಸಿದೆ. ಕುವೈತ್ ಅಧಿಕಾರಿಗಳೊಂದಿಗೆ ನಿರಂತರ ಸಮನ್ವಯ ಸಾಧಿಸಲಾಗುತ್ತಿದ್ದು, ಮೃತರ ಕುಟುಂಬಕ್ಕೆ ಅಗತ್ಯ ಎಲ್ಲ ರೀತಿಯ ಬೆಂಬಲ ಮತ್ತು ಸಹಾಯವನ್ನು ಒದಗಿಸಲು ಬದ್ಧರಾಗಿರುವುದಾಗಿ ರಾಯಭಾರ ಕಚೇರಿ ತಿಳಿಸಿದೆ.

<>><><*><><<>

ನೇಪಾಳದ ಮಾಜಿ ಪ್ರಧಾನಿ ಕೆ.ಪಿ.ಶರ್ಮಾ ಒಲಿ ಅವರನ್ನು ನಿನ್ನೆ ಕಠ್ಮಂಡು ಜಿಲ್ಲಾ ನ್ಯಾಯಾಲಯ, ಐದು ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಕಳೆದ ಸೆಪ್ಟೆಂಬರ್‌ನಲ್ಲಿ ೭೬ ಮಂದಿಯ ಸಾವಿಗೆ ಕಾರಣವಾದ ಜೆನ್ ಜೀ ಚಳವಳಿಯನ್ನು ಹತ್ತಿಕ್ಕುವಲ್ಲಿ ಭಾಗಿಯಾಗಿದ್ದಾರೆ ಎಂಬ ಆರೋಪದ ಮೇಲೆ ಕೆ.ಪಿ.ಶರ್ಮಾ ಒಲಿ ಮತ್ತು ಮಾಜಿ ಗೃಹ ಸಚಿವ ರಮೇಶ್ ಲೇಖಕ್ ಅವರನ್ನು ಶನಿವಾರ ಬಂಧಿಸಲಾಯಿತು, ನೂತನವಾಗಿ ರಚಿಸಲಾದ ಪ್ರಧಾನಿ ಬಾಲೇಂದ್ರ ಶಾ ಸರ್ಕಾರವು, ತನ್ನ ಮೊದಲ ಸಂಪುಟ ಸಭೆಯಲ್ಲಿ ಜೆನ್ ಜೀ ಪ್ರತಿಭಟನೆಗಳ ಕುರಿತ ತನಿಖಾ ಆಯೋಗದ ವರದಿಯನ್ನು ಜಾರಿಗೆ ತರಲು ನಿರ್ಧರಿಸಿದ ಒಂದು ದಿನದ ಬಳಿಕ, ಈ ಬಂಧನ ನಡೆದಿದೆ. ಹತ್ಯೆ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ ಎಂಬ ಆರೋಪದ ಕುರಿತು ಹೆಚ್ಚಿನ ತನಿಖೆ ಕೈಗೊಳ್ಳಲು, ಮಾಜಿ

ಗೃಹ ಸಚಿವ ಲೇಖಕ್ ಅವರನ್ನು ಹತ್ತು ದಿನಗಳ ಕಾಲ ನ್ಯಾಯಾಂಗ ವಿಚಾರಣೆಗೆ ಒಳಪಡಿಸುವಂತೆ ಕೋರಿ ಜಿಲ್ಲಾ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಯಿತು. ಅವರನ್ನೂ ಸಹ ಐದು ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

<>><><*><><<>

ಸ್ವಾತಂತ್ರ್ಯ ಹೋರಾಟಗಾರ ಶ್ಯಾಮ್‌ಜಿ ಕೃಷ್ಣ ವರ್ಮಾ ಅವರ ಪುಣ್ಯತಿಥಿಯಂದು ಅವರಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿಯವರು, ಶ್ಯಾಮ್‌ಜಿ ಕೃಷ್ಣ ವರ್ಮಾ ತಮ್ಮ ಕ್ರಾಂತಿಕಾರಿ ವಿಚಾರಗಳಿಂದ ಸ್ವಾತಂತ್ರ್ಯ ಚಳವಳಿಯಲ್ಲಿ ಹೊಸ ಪ್ರಜ್ಞೆಯನ್ನು ಜಾಗೃತಗೊಳಿಸಿದರು ಎಂದು ತಿಳಿಸಿದ್ದಾರೆ.

<>><><*><><<>

ಮಂಗೋಲಿಯಾದ ಉಲಾನ್ ಬಾಟರ್‌ನಲ್ಲಿ ಇಂದಿನಿಂದ ಆರಂಭವಾಗಲಿರುವ ಏಷ್ಯನ್ ಬಾಕ್ಸಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಬಾಕ್ಸರ್‌ಗಳು ತಮ್ಮ ಅಭಿಯಾನ ಆರಂಭಿಸಲಿದ್ದಾರೆ. ೨೦೨೬ರ ಕಮಾನ್‌ವೆಲ್ತ್ ಗೇಮ್ಸ್, ಏಷ್ಯನ್ ಗೇಮ್ಸ್ ಮತ್ತು ವಿಶ್ವ ಬಾಕ್ಸಿಂಗ್ ಕಪ್ ಫೈನಲ್‌ಗೂ ಮುನ್ನ ನಡೆಯುತ್ತಿರುವ ಈ ಕ್ರೀಡಾಕೂಟ ಪ್ರಸಕ್ತ ಋತುವಿನ ಅತ್ಯಂತ ಪ್ರಮುಖ ಪಂದ್ಯಾವಳಿಯಾಗಿದೆ.

<>><><*><><<>

ಗುವಾಹಟಿಯ ಬರ್ಸಪಾರ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ಥಾನ ರಾಯಲ್ಸ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಇಂದು ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಮುಂಬೈ ಇಂಡಿಯನ್ಸ್ ತಂಡ ೬ ವಿಕೆಟ್‌ಗಳಿಂದ ಜಯ ದಾಖಲಿಸಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**